ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 02 ಇಎಸ್‌ಟಿ (8) 2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 12-09-2024.

**ಹಿಂಬರಹ**

ಸರ್ಕಾರದ ಆದೇಶ ಸಂಖ್ಯೆ: ಆಇ 21 ಎಸ್‌ಆರ್‌ಪಿ 2024 ದಿನಾಂಕ:22-07-2024 ರ ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

12/9/24.

**ಆಡಳಿತಾಧಿಕಾರಿಗಳು**
**ತಾಂತ್ರಿಕ ಶಿಕ್ಷಣ ಇಲಾಖೆ**

**<u>ಇವರಿಗೆ:</u>**

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಜಂಟಿ ನಿರ್ದೇಶಕರು (ಆಡಳಿತ)/ (ಯೋಜನೆ)/ (ಸಿಡಿಸಿ)/ (ಎಟಿಎಸ್), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ, ರಿಜಿಸ್ಟ್ರಾರ್ (ಆಡಳಿತ), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ಎಲ್ಲಾ ಅಧಿಕಾರಿಗಳು /ಸಿಬ್ಬಂದಿಗಳಿಗೆ, ಮಾಹಿತಿಗಾಗಿ.
3. ಆಯುಕ್ತರ ಅಪ್ತಶಾಖೆಗೆ.
4. ನಿರ್ದೇಶಕರ ಅಪ್ತಶಾಖೆಗೆ.
5. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಕುರಿತು.

---

**ಓದಲಾಗಿದೆ**: 1. ದಿನಾಂಕ: 01.03.2018ರ ಸರ್ಕಾರಿ ಆದೇಶ ಸಂ: ಆಇ 06 ಎಸ್‌ಆರ್‌ಪಿ 2018.

2. ದಿನಾಂಕ: 19.11.2022ರ ಸರ್ಕಾರಿ ಆದೇಶ ಸಂ: ಆಇ 45 ಎಸ್‌ಆರ್‌ಪಿ 2022.

**ಪ್ರಸ್ತಾವನೆ:**

ಮೇಲೆ (2)ರಲ್ಲಿ ಓದಲಾದ ದಿನಾಂಕ: 19.11.2022ರ ಆದೇಶದಲ್ಲಿ ರಚಿಸಲಾಗಿದ್ದ 7ನೇ ರಾಜ್ಯ ವೇತನ ಆಯೋಗವು ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳು ಹಾಗೂ ಪಿಂಚಣಿ ಪರಿಷ್ಕರಣೆ ಕುರಿತಂತೆ ತನ್ನ ವರದಿಯ ಸಂಪುಟ-I ನ್ನು ಸಲ್ಲಿಸಿರುತ್ತದೆ.

7ನೇ ರಾಜ್ಯ ವೇತನ ಆಯೋಗದ ಸಂಪುಟ-I ರ ವರದಿಯಲ್ಲಿನ ಶಿಫಾರಸ್ಸುಗಳನ್ನು ಸರ್ಕಾರವು ಪರಿಗಣಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 21 ಎಸ್‌ಆರ್‌ಪಿ 2024**

**ಬೆಂಗಳೂರು, ದಿನಾಂಕ 22ನೇ ಜುಲೈ 2024**

ಮುಖ್ಯ ವೇತನ ಶ್ರೇಣಿ ಮತ್ತು ಸ್ಥಾಯಿ ವೇತನ ಶ್ರೇಣಿಗಳ ಪರಿಷ್ಕರಣೆ ಬಗ್ಗೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ರಾಜ್ಯ ಸರ್ಕಾರವು ಅಂಗೀಕರಿಸಿರುತ್ತದೆ. ಅದರಂತೆ, 7ನೇ ರಾಜ್ಯ ವೇತನ ಆಯೋಗವು ಶಿಫಾರಸ್ಸು ಮಾಡಿರುವ ಮುಖ್ಯ ವೇತನ ಶ್ರೇಣಿ ಮತ್ತು ಪರಿಷ್ಕೃತ 25 ಸ್ಥಾಯಿ ವೇತನ ಶ್ರೇಣಿಗಳನ್ನು ದಿನಾಂಕ: 01.07.2022ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲು ಸರ್ಕಾರವು ಹರ್ಷಿಸುತ್ತದೆ.

2. ಪರಿಷ್ಕೃತ ಮುಖ್ಯ ವೇತನ ಶ್ರೇಣಿ ಮತ್ತು ಪರಿಷ್ಕೃತ 25 ಸ್ಥಾಯಿ ವೇತನ ಶ್ರೇಣಿಗಳು ಈ ಕೆಳಕಂಡಂತಿವೆ:

I. **ಪರಿಷ್ಕೃತ ಮುಖ್ಯ ವೇತನ ಶ್ರೇಣಿ**: ರೂ.27000-650-29600-725-32500-800-35700-900-39300-1000-43300-1125-47800-1250-52800-1375-58300-1500-64300-1650-74200-1900-85600-2300-99400-2700-115600-3100-134200-3500-155200-4000-179200-4500-206200-5000-241200

II. ಪರಿಷ್ಕೃತ 25 ಸ್ಥಾಯಿ ವೇತನ ಶ್ರೇಣಿಗಳು:

| ಕ್ರಮ ಸಂಖ್ಯೆ | ಪ್ರಸ್ತುತ ವೇತನ ಶ್ರೇಣಿ ರೂ. | ಪರಿಷ್ಕೃತ ವೇತನ ಶ್ರೇಣಿಗಳು ರೂ. |
|---|---|---|
| 1 | 17000-400-18600-450-20400-500-22400-550-24600-600-27000-650-28950 | 27000-650-29600-725-32500-800-35700-900-39300-1000-43300-1125-46675 |
| 2 | 18600-450-20400-500-22400-550-24600-600-27000-650-29600-750-32600 | 29600-725-32500-800-35700-900-39300-1000-43300-1125-47800-1250-52800 |
| 3 | 19950-450-20400-500-22400-550-24600-600-27000-650-29600-750-32600-850-36000-950-37900 | 31775-725-32500-800-35700-900-39300-1000-43300-1125-47800-1250-52800-1375-58300-1500-61300 |
| 4 | 21400-500-22400-550-24600-600-27000-650-29600-750-32600-850-36000-950-39800-1100-42000 | 34100-800-35700-900-39300-1000-43300-1125-47800-1250-52800-1375-58300-1500-64300-1650-67600 |
| 5 | 23500-550-24600-600-27000-650-29600-750-32600-850-36000-950-39800-1100-46400-1250-47650 | 37500-900-39300-1000-43300-1125-47800-1250-52800-1375-58300-1500-64300-1650-74200-1900-76100 |
| 6 | 25800-600-27000-650-29600-750-32600-850-36000-950-39800-1100-46400-1250-51400 | 41300-1000-43300-1125-47800-1250-52800-1375-58300-1500-64300-1650-74200-1900-81800 |
| 7 | 27650-650-29600-750-32600-850-36000-950-39800-1100-46400-1250-52650 | 44425-1125-47800-1250-52800-1375-58300-1500-64300-1650-74200-1900-83700 |
| 8 | 30350-750-32600-850-36000-950-39800-1100-46400-1250-53900-1450-58250 | 49050-1250-52800-1375-58300-1500-64300-1650-74200-1900-85600-2300-92500 |
| 9 | 33450-850-36000-950-39800-1100-46400-1250-53900-1450-62600 | 54175-1375-58300-1500-64300-1650-74200-1900-85600-2300-99400 |
| 10 | 36000-950-39800-1100-46400-1250-53900-1450-62600-1650-67550 | 58300-1500-64300-1650-74200-1900-85600-2300-99400-2700-107500 |
| 11 | 37900-950-39800-1100-46400-1250-53900-1450-62600-1650-70850 | 61300-1500-64300-1650-74200-1900-85600-2300-99400-2700-112900 |

| | | |
|---|---|---|
| 12 | 40900-1100-46400-1250-53900-1450-62600-1650-72500-1900-78200 | 65950-1650-74200-1900-85600-2300-99400-2700-115600-3100-124900 |
| 13 | 43100-1100-46400-1250-53900-1450-62600-1650-72500-1900-83900 | 69250-1650-74200-1900-85600-2300-99400-2700-115600-3100-134200 |
| 14 | 45300-1100-46400-1250-53900-1450-62600-1650-72500-1900-83900-2200-88300 | 72550-1650-74200-1900-85600-2300-99400-2700-115600-3100-134200-3500-141200 |
| 15 | 48900-1250-53900-1450-62600-1650-72500-1900-83900-2200-92700 | 78000-1900-85600-2300-99400-2700-115600-3100-134200-3500-148200 |
| 16 | 52650-1250-53900-1450-62600-1650-72500-1900-83900-2200-97100 | 83700-1900-85600-2300-99400-2700-115600-3100-134200-3500-155200 |
| 17 | 56800-1450-62600-1650-72500-1900-83900-2200-97100-2500-99600 | 90200-2300-99400-2700-115600-3100-134200-3500-155200-4000-159200 |
| 18 | 61150-1450-62600-1650-72500-1900-83900-2200-97100-2500-102100 | 97100-2300-99400-2700-115600-3100-134200-3500-155200-4000-163200 |
| 19 | 67550-1650-72500-1900-83900-2200-97100-2500-104600 | 107500-2700-115600-3100-134200-3500-155200-4000-167200 |
| 20 | 70850-1650-72500-1900-83900-2200-97100-2500-107100 | 112900-2700-115600-3100-134200-3500-155200-4000-171200 |
| 21 | 74400-1900-83900-2200-97100-2500-109600 | 118700-3100-134200-3500-155200-4000-175200 |
| 22 | 82000-1900-83900-2200-97100-2500-112100-2800-117700 | 131100-3100-134200-3500-155200-4000-179200-4500-188200 |
| 23 | 90500-2200-97100-2500-112100-2800-123300 | 144700-3500-155200-4000-179200-4500-197200 |
| 24 | 97100-2500-112100-2800-128900-3100-141300 | 155200-4000-179200-4500-206200-5000-226200 |
| 25 | 104600-2500-112100-2800-128900-3100-150600 | 167200-4000-179200-4500-206200-5000-241200 |

3. ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಈ ಕೆಳಕಂಡಂತೆ ವೇತನವನ್ನು ನಿಗದಿಪಡಿಸತಕ್ಕದ್ದು:-

(ಅ) ದಿನಾಂಕ: 01.07.2022 ರಲ್ಲಿದ್ದಂತೆ ಮೂಲ ವೇತನ.

(ಆ) ದಿನಾಂಕ: 01.07.2022 ರಲ್ಲಿದ್ದಂತಹ ಬೆಲೆ ಸೂಚ್ಯಂಕ ಹಂತ 361.704 ಕ್ಕೆ ಸಂವಾದಿಯಾಗಿ ಲಭ್ಯವಿದ್ದ 31% ತುಟ್ಟಿ ಭತ್ಯೆ.

(ಇ) ದಿನಾಂಕ: 01.07.2022 ರಲ್ಲಿ ಲಭ್ಯವಿದ್ದ ಮೂಲ ವೇತನದ ಮೇಲೆ 27.50% ರಷ್ಟು ಫಿಟ್‌ಮೆಂಟ್ ಸೌಲಭ್ಯ.

(ಈ) ಮೇಲಿನ (ಅ), (ಆ), (ಇ) ಯನ್ನು ಒಟ್ಟುಗೂಡಿಸಿ ಲೆಕ್ಕ ಹಾಕಿದಾಗ ಬರುವ ಮೊತ್ತದ ನಂತರದ ಹಂತದಲ್ಲಿ ವೇತನವನ್ನು ಪರಿಷ್ಕೃತ ವೇತನ ಶ್ರೇಣಿಯಲ್ಲಿ ನಿಗದಿಪಡಿಸುವುದು.

ಪರಿಷ್ಕೃತ ವೇತನ ಶ್ರೇಣಿಗಳ ಅನುಷ್ಠಾನದ ಆರ್ಥಿಕ ಸೌಲಭ್ಯವು 1ನೇ ಆಗಸ್ಟ್ 2024ರಿಂದ ಪ್ರಾಪ್ತವಾಗತಕ್ಕದ್ದು.

4. ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅಂಗೀಕರಿಸಲು ಸರ್ಕಾರವು ಹರ್ಷಿಸುತ್ತದೆ. ಅದರಂತೆ, ಕನಿಷ್ಠ ಮತ್ತು ಗರಿಷ್ಠ ಪಿಂಚಣಿಯ ಪ್ರಸ್ತುತ ಮೊತ್ತವನ್ನು ಕ್ರಮವಾಗಿ ಮಾಸಿಕ ರೂ.8,500/- ಮತ್ತು ರೂ.75,300/- ರಿಂದ ರೂ.13,500/- ಮತ್ತು ರೂ.1,20,600/- ಗಳಿಗೆ ಮತ್ತು ಸಂವಾದಿ ಕುಟುಂಬ ಪಿಂಚಣಿಯ ಕನಿಷ್ಠ ಮತ್ತು ಗರಿಷ್ಠ ಮಿತಿಯನ್ನು ಅನುಕ್ರಮವಾಗಿ ಮಾಸಿಕ ರೂ.8,500/- ಮತ್ತು ರೂ.45,180/- ರಿಂದ ಮತ್ತು ರೂ.13,500/- ಮತ್ತು ರೂ.80,400/-ಗಳಿಗೆ ಪರಿಷ್ಕರಿಸತಕ್ಕದ್ದು. ಪರಿಷ್ಕೃತ ಪಿಂಚಣಿ ಮತ್ತು ಕುಟುಂಬ ಪಿಂಚಣಿಗಳು ದಿನಾಂಕ: 01.07.2022 ರಿಂದ ಜಾರಿಗೆ ಬರುತ್ತವೆ. ಆದರೆ, ಪಿಂಚಣಿ ಪರಿಷ್ಕರಣೆಯ ಆರ್ಥಿಕ ಲಾಭವು ದಿನಾಂಕ: 01.08.2024 ರಿಂದ ಪ್ರಾಪ್ತವಾಗತಕ್ಕದ್ದು. ಮರಣ ಮತ್ತು ನಿವೃತ್ತಿ ಉಪದಾನದ ಪ್ರಸ್ತುತ ಗರಿಷ್ಠ ಮಿತಿ ರೂ.20 ಲಕ್ಷಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

5. ದಿನಾಂಕ: 01.07.2022 ಕ್ಕೆ ಪೂರ್ವದಲ್ಲಿ ನಿವೃತ್ತರಾದ ಅಥವಾ ಸೇವೆಯಲ್ಲಿದ್ದಾಗ ಮೃತರಾದ ಸರ್ಕಾರಿ ನೌಕರರ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಈ ಕೆಳಗಿನಂತೆ ನಿಗದಿಪಡಿಸತಕ್ಕದ್ದು:-

ಅ) ದಿನಾಂಕ: 01.07.2022 ರಂದು ಇದ್ದ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನ;

ಆ) ದಿನಾಂಕ: 01.07.2022 ರಂದು ಲಭ್ಯವಿದ್ದ 31% ರಷ್ಟು ತುಟ್ಟಿ ಭತ್ಯೆ.

ಇ) ದಿನಾಂಕ: 01.07.2022 ರಂದು ಇದ್ದ ನಿವೃತ್ತಿ ವೇತನ/ಕುಟುಂಬ ವೇತನದ ಮೇಲೆ 27.50% ರಷ್ಟು ಫಿಟ್‌ಮೆಂಟ್ ಸೌಲಭ್ಯ.

ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನದ ಈ ಮೇಲಿನ (ಅ) + (ಆ) + (ಇ) ರ ಒಟ್ಟಾರೆ ಮೊತ್ತವು ಮಾಹೆಯಾನ ರೂ.13,500/- ಗಳ ಕನಿಷ್ಠ ಪಿಂಚಣಿಗೆ ಕಡಿಮೆ ಇಲ್ಲದಂತೆ ಮತ್ತು ನಿವೃತ್ತಿ ವೇತನವು ಗರಿಷ್ಠ ಮಾಹೆಯಾನ ರೂ.1,20,600/- ರ ಮಿತಿಗೆ ಹಾಗೂ ಕುಟುಂಬ ನಿವೃತ್ತಿ ವೇತನದ ಗರಿಷ್ಠ ಮೊತ್ತವು ಮಾಹೆಯಾನ ರೂ.80,400/- ಮಿತಿಗೆ ಒಳಪಟ್ಟಿರುತ್ತದೆ. ಈ ಪರಿಷ್ಕೃತ ಪಿಂಚಣಿಯ ಆರ್ಥಿಕ ಲಾಭವು ದಿನಾಂಕ: 01.08.20 24 ರಿಂದ ಪ್ರಾಪ್ತವಾಗತಕ್ಕದ್ದು.

6. ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನ ಸಂಬಂಧಿತ ಭತ್ಯೆಗಳಾದ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ, ವೈದ್ಯಕೀಯ ಭತ್ಯೆಗಳ ಪರಿಷ್ಕರಣೆಯ ಶಿಫಾರಸ್ಸು ಮತ್ತು ಪರಿಷ್ಕೃತ ವೇತನ ಹಾಗೂ ಪರಿಷ್ಕೃತ ಪಿಂಚಣಿಯಲ್ಲಿ ತುಟ್ಟಿ ಭತ್ಯೆ ಲೆಕ್ಕಾಚಾರ ಮಾಡಲು ಶಿಫಾರಸ್ಸು ಮಾಡಲಾದ ಪರಿಷ್ಕೃತ ಸೂತ್ರಕ್ಕೆ ಸಂಬಂಧಿಸಿದ ವೇತನ ಆಯೋಗದ ಶಿಫಾರಸ್ಸುಗಳನ್ನು ಅಂಗೀಕರಿಸಲಾಗಿದೆ. ಪ್ರಸ್ತುತ ಚಾಲ್ತಿಯಲ್ಲಿರುವ ಪ್ರಭಾರ ಭತ್ಯೆ ಮಂಜೂರಾತಿಯ ಪ್ರಸ್ತುತ ದರಗಳು ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಯಾವುದೇ ಬದಲಾವಣೆ ಇಲ್ಲದೇ ಮುಂದುವರೆಯುತ್ತದೆ.

7. ನೌಕರರ ಸಾಮೂಹಿಕ ವಿಮಾ ಯೋಜನೆಗೆ ನೌಕರರ ವಂತಿಗೆ ಹೆಚ್ಚಳದ ಪರಿಷ್ಕರಣೆಯ ಶಿಫಾರಸ್ಸುಗಳನ್ನು ಅಂಗೀಕರಿಸಲಾಗಿದೆ.

8. ಅನ್ವಯಿಸುವ ಬದಲಾವಣೆಯೊಂದಿಗೆ ಈ ಮೇಲಿನ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳ ನೌಕರರು ಮತ್ತು ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗಳಿಗೂ ಸಹ ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ.

9. ಮುಂದುವರೆದು, ಈ ಮೇಲಿನಂತೆ ವೇತನ ಶ್ರೇಣಿಗಳ ಪರಿಷ್ಕರಣೆಯ ಕಾರಣದಿಂದಾಗಿ ಉಂಟಾಗುವ ವೇತನ ಮತ್ತು ಭತ್ಯೆಗಳ ಹೆಚ್ಚಳವನ್ನು ದಿನಾಂಕ: 01.08.2024ರಿಂದ ನಗದಾಗಿ ಪಾವತಿ ಮಾಡತಕ್ಕದ್ದು. ದಿನಾಂಕ: 01.07.2022 ರಿಂದ 31.07.2024ರ ಅವಧಿಯಲ್ಲಿ ಸೇವೆಯಿಂದ ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅಥವಾ ಸೇವೆಯಲ್ಲಿರುವುದು ಸಮಾಪ್ತಿಗೊಂಡ ಸರ್ಕಾರಿ ನೌಕರರ ಪ್ರಕರಣಗಳಲ್ಲಿ, ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ನಿಗದಿಪಡಿಸಲಾದ ಕಾಲ್ಪನಿಕ ವೇತನವನ್ನು ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಲೆಕ್ಕ ಹಾಕುವ ಉದ್ದೇಶಗಳಿಗಾಗಿ ಪರಿಗಣಿಸತಕ್ಕದ್ದು. ಆದರೆ, ಸದರಿ ಕಾಲ್ಪನಿಕ ಪುನರ್ ನಿಗದಿಯ

ಆರ್ಥಿಕ ಲಾಭವು ನಿವೃತ್ತಿ ಹೊಂದಿದ ಸರ್ಕಾರಿ ನೌಕರನಿಗೆ ಅಥವಾ ಮರಣ ಹೊಂದಿದ ಸರ್ಕಾರಿ ನೌಕರನ ಫಲಾನುಭವಿಗೆ ಸಂದರ್ಭಾನುಸಾರ ದಿನಾಂಕ: 01.08.2024 ರಿಂದ ಪ್ರಾಪ್ತವಾಗತಕ್ಕದ್ದು.

10. ಪರಿಷ್ಕೃತ ವೇತನ ಶ್ರೇಣಿಗಳ ಹಂಚಿಕೆ ಮತ್ತು ಅದರಲ್ಲಿ ವೇತನ ಹಾಗೂ ನಿವೃತ್ತಿ ವೇತನವನ್ನು ಕ್ರಮಬದ್ಧಗೊಳಿಸುವ ಕುರಿತು, ಸರ್ಕಾರದಿಂದ ವಿವರವಾದ ನಿಯಮ ಮತ್ತು ಆದೇಶಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/07/2024

(ಎಲ್.ಕೆ.ಅತೀಕ್)

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ

ಆರ್ಥಿಕ ಇಲಾಖೆ.

22/7/2024

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ.ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಎಲ್ಲಾ ಪ್ರಾದೇಶಿಕ ಆಯುಕ್ತರು.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
8. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
9. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.

15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.

16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.

17. ಎಲ್ಲಾ ಇಲಾಖಾ ಮುಖ್ಯಸ್ಥರು.

18. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

19. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

20. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.

21. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.

22. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.

23. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.

24. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.

25. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.

26. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.

27. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**